ದಿನಾಂಕಃ 10.03.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು : 17 ರಿಂದ 19ನೇ ಪ್ರತಿವಾದಿಗಳ ಪರ ವಕೀಲರಿಂದ :**

ದಿನಾಂಕಃ 10.06.2005 ರ ಕ್ರಯಪತ್ರದ ಮೂಲಕ ನಾನು ಭಾರತೀರವರಿಂದ ಖರೀದಿಸಿದ ಆಸ್ತಿಗಳನ್ನು ಈ ಪ್ರಕರಣದಲ್ಲಿ ಸೇರಿಸಲು ತೊಂದರೆ ಇಲ್ಲ ಎಂದರೆ ಸಾಕ್ಷಿ ಅದನ್ನು ಸೇರಿಸುವ ಅಗತ್ಯ ಇಲ್ಲ ಎನ್ನುತ್ತಾರೆ. ಸದರಿ ಆಸ್ತಿ ನಮ್ಮ ಕುಟುಂಬದ್ದು ಎಂದರೆ ಸರಿ. ದಿನಾಂಕಃ 21.04.2003 ರ ನೋಂದಾಯಿತ ವಿಭಾಗ ಪತ್ರದ ಮೂಲಕ ಕುಟುಂಬದ ಆಸ್ತಿಗಳನ್ನು ಭಾಗ ಮಾಡಿಕೊಂಡಿರುವುದರಿಂದ ನಾನು ಆಸ್ತಿಗಳಲ್ಲಿ ಭಾಗ ಕೇಳಲು ಹಕ್ಕು ಇರುವುದಿಲ್ಲ ಎಂದರೆ ಸುಳ್ಳು. ಸದರಿ ವಿಭಾಗ ಪತ್ರದ ಆಧಾರದ ಮೇಲೆ ಪಕ್ಷಗಾರರು ಆಸ್ತಿಗಳ ಖಾತೆಗಳನ್ನು ಬದಲಾಯಿಸಿಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನನ್ನ ಗಮನಕ್ಕೆ ತರದೇ ಮಾಡಿಕೊಂಡಿರುತ್ತಾರೆ ಎನ್ನುತ್ತಾರೆ. ಸದರಿ ವಿಭಾಗ ಪತ್ರದ ಆಧಾರದ ಮೇಲೆ

ಪಕ್ಷಗಾರರು ಆಸ್ತಿಗಳ ಸ್ವಾಧೀನ ಹೊಂದಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನನ್ನ ಗಮನಕ್ಕೆ ತರದೇ ಹಾಗೆ ಮಾಡಿಕೊಂಡಿರುತ್ತಾರೆ ಎನ್ನುತ್ತಾರೆ.

**2.** ಪ್ರತಿವಾದಿ-17 ರವರು ಲಕ್ಷ್ಮಮ್ಮ ಮತ್ತು ಸುಶೀಲಮ್ಮರವರಿಂದ ಅವರಿಗೆ ಆಸ್ತಿಯಲ್ಲಿ ಹಕ್ಕು ಇದ್ದ ಕಾರಣ ಅದನ್ನು ಸದ್ಭಾವನೆಯಿಂದ ಖರೀದಿಸಿರುತ್ತಾರೆ ಎಂದರೆ ಸುಳ್ಳು. ಸದರಿ ಆಸ್ತಿಗಳನ್ನು ಪ್ರತಿವಾದಿ-17 ರವರು ಪ್ರತಿವಾದಿ-18 ಮತ್ತು 19 ರವರಿಗೆ ವಿಭಾಗದ ಮೂಲಕ ಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

**3.** ದಿನಾಂಕಃ10.06.2005 ರಂದು ನಾನು ಭಾರತೀರವರಿಂದ ಆಸ್ತಿಯನ್ನು ಖರೀದಿಸಿದಾಗಲೇ ದಿನಾಂಕಃ 21.04.2003 ರ ವಿಭಾಗ ಪತ್ರದ ಬಗ್ಗೆ ನನಗೆ ಮಾಹಿತಿ ಇತ್ತು ಎಂದರೆ ಸರಿಯಲ್ಲ. ನನ್ನ ವಾದ ಪತ್ರದ 3ನೇ ಖಂಡಿಕೆಯಲ್ಲಿ ಸುಳ್ಳು ಸಂಗತಿಗಳನ್ನು ಹೇಳಿದ್ದೇನೆ ಎಂದರೆ ಸರಿಯಲ್ಲ. ಸತ್ಯ ಸಂಗತಿಗಳು ಗೊತ್ತಿದ್ದರೂ ಪ್ರತಿವಾದಿ-17 ರಿಂದ 19 ರವರಿಗೆ ತೊಂದರೆ ಕೊಡಲು ಹಾಗೂ ಅವರಿಂದ ಅಕ್ರಮ ಲಾಭ ಪಡೆದುಕೊಳ್ಳಲು ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**